**All India Radio: Bangalore**
**National Bulletin In Kannada**
**15.05.2025 / 7.35am hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.05.2025 / 7.35 amhrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಸಿಂಧೂ ಜಲ ಒಪ್ಪಂದ ಅಮಾನತುಗೊಳಿಸುವಿಕೆಯನ್ನು ಮರುಪರಿಶೀಲಿಸುವಂತೆ ಭಾರತಕ್ಕೆ ಪಾಕಿಸ್ತಾನ ಮನವಿ.

೨. ಪಾಕಿಸ್ತಾನ ಧ್ವಜಗಳು ಮತ್ತು ಸಂಬಂಧಿತ ಸರಕುಗಳ ಮಾರಾಟದ ಕುರಿತು ಇ-ವಾಣಿಜ್ಯ ವೇದಿಕೆಗಳಿಗೆ ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ ನೋಟಿಸ್.

೩. ಭದ್ರತಾ ಪಡೆಗಳ ಯಶಸ್ಸು ನಕ್ಸಲ್‌ವಾದವನ್ನು ಕಿತ್ತೊಗೆಯುವ ಅಭಿಯಾನವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿರುವುದನ್ನು ತೋರುತ್ತದೆ : ಪ್ರಧಾನಿ ನರೇಂದ್ರ ಮೋದಿ

೪. ಬ್ಯಾಂಕಾಕ್‌ನಲ್ಲಿ ನಡೆಯಲಿರುವ ಥೈಲ್ಯಾಂಡ್ ಓಪನ್ ಬ್ಯಾಡ್ಮಿಂಟನ್ ಪ್ರೀ- ಕ್ವಾರ್ಟರ್ ಫೈನಲ್‌ನಲ್ಲಿ ಇಂದು ಭಾರತದ ಅಗ್ರ ಶಟ್ಲರ್‌ಗಳು ಕಣದಲ್ಲಿ.

**<><*<><>*><>**

ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನದ ರಕ್ಷಣಾ ಮತ್ತು ಮಿಲಿಟರಿಯನ್ನು ಧ್ವಂಸಗೊಳಿಸಿದ ನಂತರ ಪಾಕಿಸ್ತಾನದೊಂದಿಗಿನ ಒಪ್ಪಂದಕ್ಕೆ ಸುಮಾರು ಕೆಲವು ದಿನಗಳ ನಂತರ, ಇಸ್ಲಾಮಾಬಾದ್ ಈಗ ನವದೆಹಲಿಗೆ ಪತ್ರ ಬರೆದಿದೆ ಎಂದು ವರದಿಯಾಗಿದೆ, ಸ್ಥಗಿತಗೊಳಿಸಿರುವ ಸಿಂಧೂ ಜಲ ಒಪ್ಪಂದವನ್ನು ಮರುಪರಿಶೀಲಿಸುವಂತೆ ಪತ್ರದಲ್ಲಿ ಪಾಕಿಸ್ತಾನ ಭಾರತಕ್ಕೆ ಒತ್ತಾಯಿಸಿದೆ.

ಸಿಂಧೂ ಜಲ ಒಪ್ಪಂದದಡಿಯಲ್ಲಿ ತನ್ನ ಪ್ರದೇಶಕ್ಕೆ ನದಿಗಳ ಹರಿವನ್ನು ಪುನರಾರಂಭಿಸಲು ಪಾಕಿಸ್ತಾನದ ಜಲಸಂಪನ್ಮೂಲ ಸಚಿವಾಲಯ ನವದೆಹಲಿಗೆ ಪತ್ರ ಬರೆದಿದೆ ಎಂದು ವರದಿಯಾಗಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ತಿಳಿಸಿವೆ.

ಏಪ್ರಿಲ್ ೨೨ ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಮತ್ತೊಂದು ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ದಾಳಿಯ ಪರಿಣಾಮ ಭಾರತ ೧೯೬೦ ರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ನಂತರ ಈ ಮನವಿ ಬಂದಿದೆ.

ಭಾರತದ ವಿದೇಶಾಂಗ ಸಚಿವಾಲಯಕ್ಕೆ ಕಳುಹಿಸಲಾದ ಪತ್ರದಲ್ಲಿ, ಒಪ್ಪಂದವನ್ನು ಸ್ಥಗಿತಗೊಳಿಸುವುದರಿಂದ ದೇಶದೊಳಗೆ ಬಿಕ್ಕಟ್ಟು ಉಂಟಾಗುತ್ತದೆ ಎಂದು ಪಾಕಿಸ್ತಾನ ಸಚಿವಾಲಯ ಎಚ್ಚರಿಸಿದೆ.

೧೫.೦೫.೨೦೨೫ ರಾಷ್ಟ್ರೀಯ ವಾರ್ತೆಗಳು ಬೆಳಗ್ಗೆ ೭.೩೫ ಸಿಂಧೂ ಜಲ-೨

ಆಪರೇಷನ್ ಸಿಂಧೂರ್ ನಂತರದ ತಮ್ಮ ಮೊದಲ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸರ್ಕಾರದ ರಾಜಿಯಾಗದ ನಿಲುವನ್ನು ಒತ್ತಿ ಹೇಳಿದರು. ಭಯೋತ್ಪಾದನೆ ಮತ್ತು ವ್ಯಾಪಾರ ಏಕಕಾಲದಲ್ಲಿ ನಡೆಯಲು ಸಾಧ್ಯವಿಲ್ಲ ಎಂದು ಅವರು ಘೋಷಿಸಿದ್ದಾರೆ.

ಸಿಂಧೂ ಜಲ ಒಪ್ಪಂದವು ಪಶ್ಚಿಮಕ್ಕೆ ಹರಿಯುವ ಮೂರು ನದಿಗಳಾದ ಸಿಂಧೂ, ಝೇಲಂ ಮತ್ತು ಚೆನಾಬ್‌ಗಳನ್ನು ಪಾಕಿಸ್ತಾನಕ್ಕೆ ಹಂಚಿಕೆ ಮಾಡುತ್ತದೆ, ಆದರೆ ಪೂರ್ವ ನದಿಗಳಾದ ಸಟ್ಲೆಜ್, ಬಿಯಾಸ್ ಮತ್ತು ರಾವಿ ಭಾರತದೊಂದಿಗೆ ಉಳಿದಿವೆ.

ಈ ವಾರ ಗೃಹ ಸಚಿವ ಅಮಿತ್ ಶಾ, ಜಲಸಂಪನ್ಮೂಲ ಸಚಿವ ಪಾಟೀಲ್, ವಿದ್ಯುತ್ ಸಚಿವ ಮನೋಹರ್ ಲಾಲ್ ಖಟ್ಟರ್, ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಸಂಬಂಧಿತ ಎಲ್ಲಾ ಸಚಿವಾಲಯಗಳ ಹಿರಿಯ ಅಧಿಕಾರಿಗಳೊಂದಿಗೆ ಪ್ರಮುಖ ಸಭೆ ನಡೆಯುವ ಸಾಧ್ಯತೆಯಿದೆ. ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ನಂತರ, ಅಮಿತ್ ಶಾ, ಪಾಟೀಲ್ ಮತ್ತು ಸಚಿವಾಲಯದ ಉನ್ನತ ಅಧಿಕಾರಿಗಳ ನಡುವೆ ಈಗಾಗಲೇ ಎರಡು ಸಭೆಗಳು ನಡೆದಿವೆ.

<><*<><>*><>

ಆಪರೇಷನ್ ಸಿಂಧೂರ್ ಬಗೆಗೆ ಪ್ರಶ್ನೆಗಳನ್ನು ಎತ್ತಿದ್ದಕ್ಕಾಗಿ ವಿರೋಧ ಪಕ್ಷ ಕಾಂಗ್ರೆಸ್ ಅನ್ನು ತರಾಟೆಗೆ ತೆಗೆದುಕೊಂಡಿತು.

ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ, ಆಪರೇಷನ್ ಸಿಂಧೂರ್‌ನಲ್ಲಿ, ಸಶಸ್ತ್ರ ಪಡೆಗಳು ತಮ್ಮ ಅಸಾಧಾರಣ ಶೌರ್ಯ ಮತ್ತು ನಿಖರವಾದ ಸಾಮರ್ಥ್ಯವನ್ನು ಪ್ರದರ್ಶಿಸಿವೆ ಎಂದರು.

ಈ ಮಿಲಿಟರಿ ಕಾರ್ಯಾಚರಣೆಯ ಕುರಿತು ಕಾಂಗ್ರೆಸ್‌ನ ನಿರಂತರ ಪ್ರಶ್ನೆಗಳು ಅವರ ಉದ್ದೇಶದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುವುದಲ್ಲದೆ, ಸಂಶಯಾಸ್ಪದವಾಗಿ ಕಾಣುತ್ತದೆ. ಬದ್ಧತೆಯು ಕೇವಲ ಪದಗಳಲ್ಲಿ ಮಾತ್ರವಲ್ಲ, ಕಾರ್ಯಗಳಲ್ಲಿಯೂ ಗೋಚರಿಸಬೇಕು ಎಂದು ಅವರು ಹೇಳಿದರು.

ರಾಷ್ಟ್ರವು ಒಂದೇ ಧ್ವನಿಯಲ್ಲಿ ಮಾತನಾಡಬೇಕಾದ ಸಮಯದಲ್ಲಿ, ಕಾಂಗ್ರೆಸ್‌ನ ಇಂತಹ ಕ್ರಮಗಳು ಕೇವಲ ಅನುಚಿತವಲ್ಲ, ಅವು ಬೇಜವಾಬ್ದಾರಿಯಿಂದ ಕೂಡಿರುತ್ತವೆ ಎಂದು ಅವರು ತಿಳಿಸಿದರು.

<><*<><>*><>

ಪಾಕಿಸ್ತಾನಿ ಧ್ವಜಗಳು ಮತ್ತು ಸಂಬಂಧಿತ ಸರಕುಗಳ ಮಾರಾಟದ ಕುರಿತು ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ ಅಮೆಜಾನ್ ಇಂಡಿಯಾ, ಫ್ಲಿಪ್‌ಕಾರ್ಟ್, ಉಬುಯ್ ಇಂಡಿಯಾ, ಎಟ್ಸಿ, ಫ್ಲ್ಯಾಗ್ ಕಂಪನಿ ಮತ್ತು ಫ್ಲ್ಯಾಗ್ ಕಾರ್ಪೊರೇಷನ್‌ಗೆ ನೋಟಿಸ್ ಜಾರಿ ಮಾಡಿದೆ.

ಇಂತಹ ಅಸಂವೇದನಾಶೀಲತೆಯನ್ನು ಸಹಿಸಲಾಗುವುದಿಲ್ಲ ಎಂದು, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಇ-ವಾಣಿಜ್ಯ ವೇದಿಕೆಗಳು ಅಂತಹ ಎಲ್ಲಾ ವಿಷಯವನ್ನು ತಕ್ಷಣ ತೆಗೆದುಹಾಕುವಂತೆ ಮತ್ತು ರಾಷ್ಟ್ರೀಯ ಕಾನೂನುಗಳನ್ನು ಪಾಲಿಸುವಂತೆ ನಿರ್ದೇಶಿಸಲಾಗಿದೆ ಎಂದು ಅವರು ಹೇಳಿದರು.

<><*<><>*><>

ಭದ್ರತಾ ಪಡೆಗಳ ಯಶಸ್ಸು ನಕ್ಸಲ್‌ರನ್ನು ಬೇರುಸಹಿತ ಕಿತ್ತೊಗೆಯುವ ಅಭಿಯಾನವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದನ್ನು ತೋರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ಅನ್ನು ಹಂಚಿಕೊಂಡ ಮೋದಿ ಅವರು, ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಶಾಂತಿ ಸ್ಥಾಪಿಸಲು ಮತ್ತು ಅಭಿವೃದ್ಧಿಯ ಮುಖ್ಯವಾಹಿನಿಯೊಂದಿಗೆ ಸಂಪರ್ಕಿಸಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಹೇಳಿದರು.

<><*<><>*><>

ಛತ್ತೀಸ್‌ಗಡದ ಬಿಜಾಪುರ ಜಿಲ್ಲೆಯ ಕರೇಗುಟ್ಟ ಬೆಟ್ಟದಲ್ಲಿ ನಡೆಸಲಾದ ಮಾವೋವಾದಿ ವಿರೋಧಿ ಕಾರ್ಯಾಚರಣೆಯಲ್ಲಿ ೧೬ ಮಹಿಳೆಯರು ಸೇರಿದಂತೆ ೩೧ ಮಾವೋವಾದಿಗಳು ಹತರಾಗಿದ್ದಾರೆ.

ಈ ಕುರಿತಂತೆ ಬಿಜಾಪುರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಿಆರ್‌ಪಿಎಫ್ ಮಹಾನಿರ್ದೇಶಕ ಜ್ಞಾನೇಂದ್ರ ಪ್ರತಾಪ್ ಸಿಂಗ್, ಛತ್ತೀಸ್‌ಗಡ ಪೊಲೀಸ್ ಮಹಾನಿರ್ದೇಶಕ ಅರುಣ್ ದೇವ್ ಗೌತಮ್ ಮತ್ತು ಬಿಜಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ಯಾದವ್, ಮಾಹಿತಿ ನೀಡಿದರು.

ಏಪ್ರಿಲ್ ೨೧ ರಿಂದ ಈ ತಿಂಗಳ ೧೧ರವರೆಗೆ ಸುಮಾರು ೨೧ ದಿನಗಳ ಕಾಲ ನಡೆದ ಕಾರ್ಯಾಚರಣೆಯಲ್ಲಿ ಹತರಾದ ೩೧ ಮಾವೋವಾದಿಗಳಲ್ಲಿ ೨೮ ಮಂದಿಯ ಗುರುತು ಪತ್ತೆಯಾಗಿದೆ. ಇವರ ಕುರಿತು ಮಾಹಿತಿ ನೀಡಿದವರಿಗೆ ಒಟ್ಟು ೧.೭೨ ಕೋಟಿ ರೂಪಾಯಿ ಪುರಸ್ಕಾರ ಘೋಷಿಸಲಾಗಿತ್ತು.

೨೦೨೬ರ ಮಾರ್ಚ್‌ರೊಳಗೆ ದೇಶವನ್ನು ನಕ್ಸಲ್ ಮುಕ್ತಗೊಳಿಸುವ ಕೇಂದ್ರ ಸರ್ಕಾರದ ಸಂಕಲ್ಪವನ್ನು ಸಾಧಿಸುವ ಉದ್ದೇಶದಿಂದ ಈ ಕಾರ್ಯಚರಣೆಗಳನ್ನು ನಡೆಸಲಾಗುತ್ತಿದೆ ಎಂದು ಸಿಆರ್‌ಪಿಎಫ್ ಮಹಾನಿರ್ದೇಶಕ ಜ್ಞಾನೇಂದ್ರ ಪ್ರತಾಪ್ ಸಿಂಗ್ ತಿಳಿಸಿದರು.

<><*<><>*><>

ಪಶ್ಚಿಮ ಗಡಿ ಭದ್ರತೆಯ ಪರಿಶೀಲನೆ ನಂತರ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗುಜರಾತ್‌ನಲ್ಲಿರುವ ಭಾರತೀಯ ವಾಯುಪಡೆಯ ಭುಜ್ ವಾಯುನೆಲೆಗೆ ನಾಳೆಯಿಂದ ೨ ದಿನಗಳ ಕಾಲ ಭೇಟಿ ನೀಡಲಿದ್ದಾರೆ. ಈ ವಾಯು ನೆಲೆ, ಪಾಕಿಸ್ತಾನ ನಡೆಸಿದ ಡ್ರೋನ್ ದಾಳಿಯನ್ನು ಸಮರ್ಥವಾಗಿ ಎದುರಿಸಿ ವಿಫಲಗೊಳಿಸಿತ್ತು.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಶ್ರೀ ಮಾತಾ ವೈಷ್ಣೋ ದೇವಿ ದೇವಾಲಯ ಮಂಡಳಿ ಉಚಿತ ಆರತಿ ದರ್ಶನ ಮತ್ತು ವಸತಿ ಸೇರಿದಂತೆ ಯಾತ್ರಾರ್ಥಿಗಳಿಗೆ ಅನುಕೂಲ ಕಲ್ಪಿಸಲು ಹಲವಾರು ಕ್ರಮಗಳನ್ನು ಘೋಷಿಸಿದೆ.

ಭಾರತ ಮತ್ತು ಪಾಕಿಸ್ತಾನ ನಡುವಿನ ಇತ್ತೀಚಿನ ಕದನ ವಿರಾಮದ ನಂತರ, ಭಕ್ತರು ಕ್ರಮೇಣ ವಿಶ್ವಪ್ರಸಿದ್ಧ ಯಾತ್ರಾ ಸ್ಥಳವಾದ ಮಾತಾ ವೈಷ್ಣೋ ದೇವಿ ಭವನಕ್ಕೆ ಆಗಮಿಸುತ್ತಿದ್ದಾರೆ ಎಂದು ನಮ್ಮ ಆಕಾಶವಾಣಿ ಜಮ್ಮು ವರದಿಗಾರ ವರದಿ ಮಾಡಿದ್ದಾರೆ.

ಕತ್ರಾದಲ್ಲಿರುವ ಮೂಲ ಶಿಬಿರದಿಂದ ಮಾತಾ ವೈಷ್ಣೋ ದೇವಿ ಭವನಕ್ಕೆ ಉಚಿತ ಸೌಲಭ್ಯಗಳನ್ನು ಒದಗಿಸುವ ದೇವಾಲಯ ಮಂಡಳಿಯ ಪ್ರಯತ್ನಗಳಿಂದ ಭಕ್ತರು ತೀರ್ಥಯಾತ್ರೆಗೆ ಮರಳಲು ಪ್ರಾರಂಭಿಸಿದ್ದಾರೆ.ಈ ಉಪಕ್ರಮವು ಹೆಚ್ಚಿನ ಯಾತ್ರಿಕರು ಪ್ರಯಾಣವನ್ನು ಕೈಗೊಳ್ಳಲು ಪ್ರೋತ್ಸಾಹಿಸುವ ಗುರಿಯನ್ನು ಹೊಂದಿದೆ. ಜಮ್ಮು ವಿಮಾನ ನಿಲ್ದಾಣವು ನಾಗರಿಕ ವಿಮಾನಗಳು ಮತ್ತು ಹೆಲಿಕಾಪ್ಟರ್ ಸೇವೆಗಳನ್ನು ಒಳಗೊಂಡಂತೆ ಕಾರ್ಯಾಚರಣೆಯನ್ನು ಪುನರಾರಂಭಿಸಿದೆ. ದೇವಾಲಯ ಮಂಡಳಿಯು ಆನ್‌ಲೈನ್ ಬುಕಿಂಗ್ ಮತ್ತು ಕೌಂಟರ್‌ಗಳ ಮೂಲಕವೂ ವಿಮಾನ ಪ್ರಯಾಣವನ್ನು ಸುಗಮಗೊಳಿಸುತ್ತಿದೆ. ದೇವಾಲಯ ಮಂಡಳಿಯು ಪೊಲೀಸ್ ಮತ್ತು ಸಿಆರ್‌ಪಿಎಫ್ ಮೇಲ್ವಿಚಾರಣೆಯಲ್ಲಿ ಸಮಗ್ರ ಭದ್ರತಾ ವ್ಯವಸ್ಥೆಗಳನ್ನು ಜಾರಿಗೆ ತಂದಿದೆ ಮತ್ತು ಸಿಸಿಟಿವಿ ಕಣ್ಗಾವಲು ವ್ಯವಸ್ಥೆಗಳು ಮತ್ತು ಇಂಟಿಗ್ರೇಟೆಡ್ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್ ಕಾರ್ಯನಿರ್ವಹಿಸುತ್ತಿದೆ ಎಂದು ಎಸ್‌ಎಂವಿಡಿಎಸ್‌ಬಿಯ ಸಿಇಒ ಅಂಶುಲ್ ಗರ್ಗ್ ಹೇಳಿದ್ದಾರೆ.

<><*<><>*><>

ರಷ್ಯಾ ಮತ್ತು ಉಕ್ರೇನ್ ನಡುವಿನ ನೇರ ಶಾಂತಿ ಮಾತುಕತೆಗೆ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹಾಜರಾಗುವುದಿಲ್ಲ ಎಂದು ರಷ್ಯಾ ಘೋಷಿಸಿದೆ.

ಟರ್ಕಿಯ ಇಸ್ತಾನ್‌ಬುಲ್‌ನಲ್ಲಿ ಇಂದು ನಡೆಯಲಿರುವ ಈ ಮಾತುಕತೆಗೆ ಅವರ ಬದಲಾಗಿ, ಅವರ ಸಹಾಯಕ ವ್ಲಾಡಿಮಿರ್ ಮೆಡಿನ್ಸ್ಕಿ ರಷ್ಯಾದ ನಿಯೋಗವನ್ನು ಮುನ್ನಡೆಸಲಿದ್ದಾರೆ ಎಂದು ಕ್ರೆಮ್ಲಿನ್ ದೃಢಪಡಿಸಿದೆ. ನಿಯೋಗದ ಇತರ ಸದಸ್ಯರಲ್ಲಿ ಉಪ ವಿದೇಶಾಂಗ ಸಚಿವ ಮಿಖಾಯಿಲ್ ಗಲುಜಿನ್, ಜನರಲ್ ಸ್ಟಾಫ್ ನಿರ್ದೇಶಕ ಇಗೊರ್ ಕೋಸ್ಟ್ಯುಕೋವ್ ಮತ್ತು ಉಪ ರಕ್ಷಣಾ ಸಚಿವ ಅಲೆಕ್ಸಾಂಡರ್ ಫೋಮಿನ್ ಇರಲಿದ್ದಾರೆ.

ಈ ಹಿಂದೆ, ಉಕ್ರೇನ್‌ನ ಅಧ್ಯಕ್ಷ ವ್ಲಾಡಿಮಿರ್ ಝೆಲೆನ್ಸ್ಕಿ ಅವರು ರಷ್ಯಾ ಅಧ್ಯಕ್ಷ ಪುಟಿನ್ ಒಪ್ಪಿದರೆ ಅವರನ್ನು ವೈಯಕ್ತಿಕವಾಗಿ ಭೇಟಿಯಾಗಲು ಇಚ್ಛೆ ವ್ಯಕ್ತಪಡಿಸಿದ್ದರು.

<><*<><>*><>

ಬ್ಯಾಂಕಾಕ್‌ನಲ್ಲಿ ಇಂದು ನಡೆಯಲಿರುವ ಥೈಲ್ಯಾಂಡ್ ಓಪನ್ ಬ್ಯಾಡ್ಮಿಂಟನ್ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಅಗ್ರ ಶಟ್ಲರ್‌ಗಳು ಕಣಕ್ಕಿಳಿಯಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ, ತರುಣ್ ಮನ್ನೆಪಲ್ಲಿ ಡೆನ್ಮಾರ್ಕ್‌ನ ಆಂಡರ್ಸ್ ಆಂಟನ್ಸನ್ ಅವರನ್ನು ಎದುರಿಸಲಿದ್ದಾರೆ.

ಮಹಿಳಾ ಸಿಂಗಲ್ಸ್‌ನಲ್ಲಿ, ಭಾರತದ ಅಗ್ರ ಶಟ್ಲರ್ ಮಾಳವಿಕಾ ಬನ್ಸೋಡ್ ಥೈಲ್ಯಾಂಡ್‌ನ ರಚನೋಕ್ ಇಂಟಾನಾನ್ ಅವರನ್ನು ಎದುರಿಸಲಿದ್ದಾರೆ. ಮತ್ತೊಬ್ಬ ಭಾರತೀಯ ಶಟ್ಲರ್ ಉನ್ನತಿ ಹೂಡಾ ಸ್ಥಳೀಯ ಆಟಗಾರ ಪೋರ್ನ್‌ಪವೀ ಚೋಚುವಾಂಗ್ ಅವರನ್ನು ಎದುರಿಸಲಿದ್ದಾರೆ, ಈ ನಡುವೆ ಆಕರ್ಷಿ ಕಶ್ಯಪ್  ಥಾಯ್ ಶಟ್ಲರ್ ಸುಪಾನಿಡಾ ಕಟೆಥಾಂಗ್ ಅವರನ್ನು ಎದುರಿಸಲಿದ್ದಾರೆ.

ಮಹಿಳಾ ಡಬಲ್ಸ್‌ನಲ್ಲಿ, ಭಾರತದ  ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜಪಾನ್‌ನ ಸಯಾಕಾ ಹೋಬರಾ ಮತ್ತು ರುಯಿ ಹಿರೋಕಾಮಿ ಅವರನ್ನು ಎದುರಿಸಲಿದ್ದಾರೆ.

<><*<><>*><>

ದೇಶದಲ್ಲಿ ಸುಳ್ಳು ಸುದ್ದಿ ಹರಡಿದ ಆರೋಪದ ಮೇಲೆ ಸಾಮಾಜಿಕ ಮಾಧ್ಯಮ ಎಕ್ಸ್‌ನ ಗ್ಲೋಬಲ್ ಟೈಮ್, ಷಿನ್ಹುವಾ ಸುದ್ದಿವಾಹಿನಿ ಮತ್ತು ಟಿಆರ್‌ಟಿ ವಲಗೆ ಸೇರಿದ್ದ ಖಾತೆಗಳ ಮೇಲೆ ಕೇಂದ್ರ ಸರ್ಕಾರ ನಿರ್ಬಂಧ ಹೇರಿದೆ.

ಗ್ಲೋಬಲ್ ಟೈಮ್ ಅನ್ನುವುದು ಚೀನಾದ ಕಮುನಿಸ್ಟ್ ಪಕ್ಷದ ಮಾಲೀಕತ್ವದ ಪೀಪಲ್ಸ್ ಡೈಲಿಯಡಿಯಲ್ಲಿ ಕಾರ್ಯನಿರ್ವಹಿಸುವ ಆಂಗ್ಲ ಟ್ಯಾಬ್ಲಾಯ್ಡ್ ಪತ್ರಿಕೆಯಾಗಿದೆ. ಷಿನ್ಹುವಾ ಸುದ್ದಿವಾಹಿನಿ ಚೀನಾದ ಅಧಿಕೃತ ರಾಜ್ಯ ಸುದ್ದಿ ಸಂಸ್ಥೆಯಾಗಿದೆ. ಹಾಗೂ ಟಿಆರ್‌ಟಿ ವಲ ಟರ್ಕಿಯ ಸಾರ್ವಜನಿಕ ಪ್ರಸಾರ ಸಂಸ್ಥೆಯಾಗಿದೆ.

<><*<><>*><>